# Akashvani: Bangalore
# Regional Bulletin In Kannada
# 03.07.2026: 14.30hrs

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 03.07.2026: 14.30hrs

*********

**ಮುಖ್ಯಾಂಶಗಳು :**

1. ಬಿಎಲ್‌ಒಗಳು ಗಣತಿ ನಮೂನೆ, ಮನೆ ಮನೆಗೆ ತೆರಳಿ ವಿತರಿಸುವಂತೆ ಚುನಾವಣಾಧಿಕಾರಿ ಅನ್ಬುಕುಮಾರ್ ಸೂಚನೆ
2. ರಾಮನಗರ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಅಕ್ರಮ; ತನಿಖೆಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆಗ್ರಹ
3. ೩೦ ದಿನದ ಕಾರ್ಯಾವಧಿ ಕಾರ್ಯಸೂಚಿ ಮಂಡಿಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
4. ನಗರಾಭಿವೃದ್ಧಿ ಇಲಾಖೆಗೆ ಬಾಕಿ ಅನುದಾನ ಬಿಡುಗಡೆ ಮಾಡುವಂತೆ ಕೇಂದ್ರವನ್ನು ಒತ್ತಾಯಿಸಿದ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ
5. ಮೇಕೆದಾಟು ಯೋಜನೆ ಕುರಿತು ತಮಿಳುನಾಡು ಕಾಂಗ್ರೆಸ್ ನಿಲುವಿನ ಬಗ್ಗೆ ಮುಖ್ಯಮಂತ್ರಿ ಮೌನ; ಬಿಜೆಪಿ ಆಕ್ಷೇಪ

*********

ರಾಜ್ಯದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಬಿಎಲ್‌ಒಗಳು ಮನೆ - ಮನೆಗೆ ತೆರಳಿ ಗಣತಿ ನಮೂನೆ ವಿತರಿಸುತ್ತಿಲ್ಲ ಎಂಬ ದೂರುಗಳ ಹಿನ್ನೆಲೆಯಲ್ಲಿ ರಾಜ್ಯ ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕುಮಾರ್ ಎಲ್ಲಾ ಜಿಲ್ಲಾ ಚುನಾವಣಾಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ. ಆಯೋಗದ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಸೂಚಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದಿರುವ ರಾಜ್ಯ ಮುಖ್ಯ ಚುನಾವಣಾಧಿಕಾರಿ, ಎಲ್ಲಾ ಬಿಎಲ್‌ಒಗಳು ಕಡ್ಡಾಯವಾಗಿ ಮತದಾರರ ಮನೆ ಬಾಗಿಲಿಗೆ ತೆರಳಿ, ಫಾರಂ ವಿತರಿಸಬೇಕು. ವಿಶೇಷ ತೀವ್ರ ಪರಿಷ್ಕರಣೆಯ ಎಲ್ಲಾ ಹಂತಗಳಲ್ಲಿಯೂ ಕೇಂದ್ರ ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ

ಪಾಲಿಸಲು ಅಧಿಕಾರಿಗಳು ಅಗತ್ಯ ನಿರ್ದೇಶನ ನೀಡಬೇಕು ಎಂದು ಆದೇಶ ನೀಡಿದ್ದಾರೆ. ಗಣತಿ ನಮೂನೆ ತುಂಬಲು ಕಷ್ಟವಾಗುವ ಮತದಾರರು ಮತದಾರರ ಸಹಾಯಕ ಕೇಂದ್ರಗಳಿಗೆ ಭೇಟಿ ನೀಡಿ, ನೆರವು ಪಡೆಯಬಹುದು ಎಂದು ತಿಳಿಸಿದ್ದಾರೆ.

*********

ರಾಜ್ಯ ಸರ್ಕಾರ ಕೇಳಿರುವ ೧೨ ಪ್ರಶ್ನೆಗಳಿಗೆ ಕೇಂದ್ರ ಚುನಾವಣಾ ಆಯೋಗ ಮೊದಲು ಉತ್ತರ ನೀಡಲಿ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮತದಾರರ ಪಟ್ಟಿ ಸಮಗ್ರ ಪರಿಶೀಲನೆಗೆ ಅದರದ್ದೇ ಆದ ಮಾನದಂಡಗಳಿವೆ. ಅದರಂತೆಯೇ ಪ್ರಕ್ರಿಯೆ ನಡೆಯಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ಯಾವುದೇ ನಾಗರಿಕರ ಮತದಾನದ ಹಕ್ಕನ್ನು ಕಸಿದುಕೊಳ್ಳಲು ಯಾರಿಗೂ ಅವಕಾಶವಿಲ್ಲ ಎಂದು ಹೇಳಿದ್ದಾರೆ. ರಾಮನಗರದ ಕಲ್ಯಾಣ ಮಂಟಪದಲ್ಲಿ ನಡೆದ ಎಸ್ಐಆರ್ ಪ್ರಕ್ರಿಯೆ ಸರಿಯಲ್ಲ ಎಂದು ತಿಳಿಸಿದ ಗೃಹ ಸಚಿವರು ಈ ವಿಷಯವನ್ನು ಚುನಾವಣಾ ಆಯೋಗವೇ ಬಗೆಹರಿಸಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

*********

ರಾಮನಗರದಲ್ಲಿ ನಡೆಯುತ್ತಿರುವ ಎಸ್ಐಆರ್ ಪ್ರಕ್ರಿಯೆಯಲ್ಲಿ ರಾಜ್ಯ ಸರ್ಕಾರದ ನೇರ ಹಸ್ತಕ್ಷೇಪ ಮತ್ತು ರಾಜಕೀಯ ಪ್ರಭಾವ ಎದ್ದು ಕಾಣುತ್ತಿದ್ದು, ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆಗ್ರಹಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಂಚಿಕೊಂಡಿರುವ ಅವರು, ಇದು ಪ್ರಜಾಪ್ರಭುತ್ವದ ಆಶಯಕ್ಕೆ ದ್ರೋಹ ಬಗೆದಂತಿದೆ ಎಂದು ತಿಳಿಸಿದ್ದಾರೆ. ಕೇಂದ್ರ ಚುನಾವಣಾ ಆಯೋಗದ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ನಿಯಮಾವಳಿ, ಮಾರ್ಗಸೂಚಿಗಳನ್ನು ಸಂಪೂರ್ಣ ಗಾಳಿಗೆ ತೂರಿ, ಸ್ಥಳೀಯ ಬಿಎಲ್ಒಗಳನ್ನು ದುರ್ಬಳಕೆ ಮಾಡಿಕೊಂಡಿರುವ ಈ ಪರಿಷ್ಕರಣೆ, ಕಾನೂನುಬಾಹಿರವಾಗಿದೆ ಎಂದು ಆರೋಪಿಸಿದ್ದಾರೆ.

*********

ರಾಜ್ಯದಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಮುಂದುವರಿದಿದೆ. ಬಳ್ಳಾರಿ ಜಿಲ್ಲೆಯಲ್ಲಿ ಮನೆ ಮನೆ ಭೇಟಿ ಮುಂದುವರೆದಿದ್ದು, ಜೂನ್ ೩೦ ರಿಂದ ಜುಲೈ ೨೮ ವರೆಗೆ ೧ ಲಕ್ಷದ ೯೦ ಸಾವಿರದ ೨೩೪ ಗಣತಿ ನಮೂನೆಗಳನ್ನು ಮತದಾರರಿಗೆ ಹಂಚಿಕೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ತಿಳಿಸಿದ್ದಾರೆ. ಉತ್ತರ ಕನ್ನಡ ಜಿಲ್ಲೆಯಲ್ಲಿ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಚುರುಕಿನಿಂದ ಸಾಗಿದ್ದು, ಇದುವರೆಗೂ ಜಿಲ್ಲೆಯಾದ್ಯಂತ ಒಟ್ಟು ೩ ಲಕ್ಷದ ೯೫ ಸಾವಿರದ ೨೩ ಎನ್ಯುಮರೇಷನ್ ಫಾರ್ಮ್ ಗಳನ್ನು ವಿತರಿಸಲಾಗಿದ್ದು, ೩ ಸಾವಿರದ ೩೬ ಫಾರ್ಮ್ ಗಳನ್ನು ಗಣಕೀಕರಣಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ಕೆ. ಲಕ್ಷ್ಮಿ ಪ್ರಿಯಾ ತಿಳಿಸಿದ್ದಾರೆ. ದಾವಣಗೆರೆ ಜಿಲ್ಲೆಯಲ್ಲಿ ಮತದಾರರ ಮಾಹಿತಿ ಸಂಗ್ರಹಣೆ ಕಾರ್ಯ ಮುಂದುವರಿದಿದ್ದು, ಕ್ಷೇತ್ರವಾರು ಸ್ಥಳಾಂತರ, ಮರಣ ಹಾಗೂ ದ್ವಿಪ್ರತಿ ಸೇರಿದಂತೆ ಒಟ್ಟು ೧೫೯ ವಿವಿಧ ಪ್ರಕರಣಗಳನ್ನು ಪತ್ತೆಹಚ್ಚಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಪ್ರಗತಿಯಲ್ಲಿದ್ದು, ಮತದಾರರಿಗೆ ಜಾಗೃತಿ ಮೂಡಿಸಲು ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾರರಿಗೆ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಕೋಲಾರದಲ್ಲಿ ಸಾರ್ವಜನಿಕರಲ್ಲಿ ವ್ಯಾಪಕ ಅರಿವು ಮೂಡಿಸುವ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಬಲಪಡಿಸುವ ನಿಟ್ಟಿನಲ್ಲಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಸ್ವೀಪ್ ಸಮಿತಿಯ ಸಂಯುಕ್ತ ಆಶ್ರಯದಲ್ಲಿ ಇಂದು ಸೈಕಲ್ ಜಾಥಾ ಆಯೋಜಿಸಲಾಗಿತ್ತು. ಕೋಲಾರ ನಗರದ ಬಂಗಾರಪೇಟೆ ಸರ್ಕಲ್ ನಿಂದ ಆರಂಭವಾದ ಜಾಗೃತಿ ಜಾಥಾಗೆ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಪ್ರವೀಣ್ ಪಿ ಬಾಗೇವಾಡಿ ಜಂಟಿಯಾಗಿ ಚಾಲನೆ ನೀಡಿದರು.

*********

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧಿಕಾರ ಸ್ವೀಕರಿಸಿ ಇಂದಿಗೆ ೩೦ ದಿನಗಳಾಗಿದೆ. ರಾಜ್ಯದ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್, ರಾಜ್ಯದೆಲ್ಲೆಡೆ ಬಿ ಇಂದ ಎ ಖಾತಾ ಪರಿವರ್ತನೆ ಸೇರಿದಂತೆ ಹಲವು ಮಹತ್ವದ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಕಚೇರಿ

ಪ್ರಕಟಣೆಯಲ್ಲಿ ತಿಳಿಸಿದೆ. ಗ್ಯಾರಂಟಿ ಯೋಜನೆಗಳು ರಾಜ್ಯದವರಿಗೆ ಮಾತ್ರ ಸಿಗಬೇಕು. ಈ ಹಿನ್ನೆಲೆಯಲ್ಲಿ ಸೋರಿಕೆ ತಪ್ಪಿಸಲು ಕ್ರಮ ಕೈಗೊಳ್ಳಬೇಕು, ರೌಡಿಗಳ ನಿಗ್ರಹಕ್ಕೆ ಜಿಲ್ಲೆಗೊಂದು ಪಡೆ, ಭ್ರಷ್ಟಾಚಾರದ ವಿರುದ್ಧ ದೂರು ನೀಡಲು ದೂರವಾಣಿ ಸಂಖ್ಯೆ, ಮೀಟರ ಬಡ್ಡಿ ದಂಧೆಗೆ ಕಡಿವಾಣ ಹಾಕಲು ಅಧಿಕಾರಿಗಳಿಗೆ ನಿರ್ದೇಶನ, ರೈತರಿಗೆ ಸಕಾಲದಲ್ಲಿ ಬಿತ್ತನೆ ಬೀಜ, ಗೊಬ್ಬರ ಪೂರೈಕೆಗೆ ಸೂಚನೆ ಸೇರಿದಂತೆ ಹಲವಾರು ಪ್ರಮುಖ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಸ್ಪಷ್ಟಪಡಿಸಿದೆ.

*********

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಪತ್ನಿ ಹಾಗೂ ಸಹೋದರ ಡಿ.ಕೆ. ಸುರೇಶ್ ಅವರೊಂದಿಗೆ ಇಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಿವಾಸಕ್ಕೆ ತೆರಳಿ, ಮಾತುಕತೆ ನಡೆಸಿದ್ದಾರೆ. ಈ ಕುರಿತಂತೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಂಚಿಕೊಂಡಿರುವ ಮುಖ್ಯಮಂತ್ರಿ, ರಾಜ್ಯದ ಸಮಗ್ರ ಅಭಿವೃದ್ಧಿ, ಜನಕಲ್ಯಾಣ ಹಾಗೂ ಸುಭದ್ರ ಭವಿಷ್ಯ ನಿರ್ಮಾಣಕ್ಕೆ ಸಿದ್ದರಾಮಯ್ಯನವರ ಮಾರ್ಗದರ್ಶನ ಮತ್ತು ಆಶೀರ್ವಾದ ಸದಾ ಪ್ರೇರಣೆಯಾಗಿದೆ ಎಂದು ತಿಳಿಸಿದ್ದಾರೆ.

*********

೧೫ನೇ ಹಣಕಾಸು ಆಯೋಗದ ಶಿಫಾರಸಿನ ಅನ್ವಯ ರಾಜ್ಯದ ನಗರಾಭಿವೃದ್ಧಿ ಇಲಾಖೆಗೆ ಕೇಂದ್ರ ಸರ್ಕಾರದಿಂದ ಬರಬೇಕಿರುವ ಸುಮಾರು ೮೮೭ ಕೋಟಿ ಬಾಕಿ ರೂಪಾಯಿ ಅನುದಾನವನ್ನು ಶೀಘ್ರವೇ ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಲಾಗಿದೆ ಎಂದು ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ತಿಳಿಸಿದ್ದಾರೆ. ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿಗೆ ಆಗಮಿಸಿದ್ದ ಕೇಂದ್ರ ನಗರಾಭಿವೃದ್ಧಿ ಇಲಾಖೆಯ ರಾಜ್ಯ ಸಚಿವರಾದ ತೋಖನ್ ಸಾಹು ಅವರನ್ನು ಖುದ್ದಾಗಿ ಭೇಟಿಯಾಗಿ ಇಲಾಖೆಯ ಪ್ರಮುಖ ಬೇಡಿಕೆಗಳ ಕುರಿತು ಸುದೀರ್ಘ ಚರ್ಚೆ ನಡೆಸಲಾಗಿದೆ ಎಂದು ಹೇಳಿದ್ದಾರೆ.

****ಧ್ವನಿ**** ಯತೀಂದ್ರ ಸಿದ್ದರಾಮಯ್ಯ

*********

ಮೇಕೆದಾಟು ಯೋಜನೆ ಕುರಿತಂತೆ ತಮಿಳುನಾಡು ಕಾಂಗ್ರೆಸ್ ನಿಲುವಿನ ಬಗ್ಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಏಕೆ ಮೌನವಾಗಿದ್ದಾರೆ ಎಂದು ಬಿಜೆಪಿ ಪ್ರಶ್ನಿಸಿದೆ. ರಾಜಕೀಯ ಒತ್ತಡಗಳಿಂದ

ಈ ವಿಷಯವನ್ನು ಕೈಬಿಡಲಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಕನ್ನಡಿಗರ ಮೇಲೆ ನಿಜವಾದ ಕಾಳಜಿ ಇದ್ದರೆ, ಚೆನ್ನೈಗೆ ಪಾದಯಾತ್ರೆ ಕೈಗೊಂಡು ತಮಿಳುನಾಡು ಕಾಂಗ್ರೆಸ್ ಕಚೇರಿ ಮುಂದೆ ಉಪವಾಸ ಸತ್ಯಾಗ್ರಹ ಕೈಗೊಳ್ಳುವಂತೆ ಸವಾಲು ಹಾಕಿದ್ದಾರೆ. ಕಾವೇರಿಕೊಳ್ಳದ ರೈತರ ಹಾಗೂ ಬೆಂಗಳೂರಿನ ಕೋಟ್ಯಾಂತರ ಜನರ ಕುಡಿಯುವ ನೀರಿನ ಹಕ್ಕಿಗಿಂತ ದೆಹಲಿ ಹೈಕಮಾಂಡ್ ಅಣತಿ ಹಾಗೂ ತಮಿಳುನಾಡಿನ ಮೈತ್ರಿ ರಾಜಕಾರಣವೇ ಹೆಚ್ಚಾಯಿತೇ ಎಂದು ಅಶೋಕ ಪ್ರಶ್ನಿಸಿದ್ದಾರೆ.

*********

ಕಲಬುರಗಿ ಪೊಲೀಸ್ ಠಾಣೆಯಿಂದ ಪೋಕ್ಸೋ ಆರೋಪಿಯೊಬ್ಬ ಪರಾರಿಯಾಗಿದ್ದಾನೆ. ಪರಾರಿಯಾಗಿರುವ ಆರೋಪಿಯನ್ನು ಪತ್ತೆಹಚ್ಚಲು ಪೊಲೀಸರು ವಿಶೇಷ ತಂಡ ರಚಿಸಿದ್ದಾರೆ. ಕರ್ನಾಟಕ, ಆಂಧ್ರಪ್ರದೇಶ, ಮಹಾರಾಷ್ಟ್ರದಲ್ಲಿ ಆರೋಪಿಗಾಗಿ ಪೊಲೀಸರು ಶೋಧ ಆರಂಭಿಸಿದ್ದಾರೆ. ಘಟನೆ ಕುರಿತಂತೆ ತನಿಖೆ ನಡೆಯುತ್ತಿದ್ದು, ಗಂಭೀರ ಭದ್ರತಾ ಲೋಪವನ್ನು ಹಿರಿಯ ಅಧಿಕಾರಿಗಳು ಒಪ್ಪಿಕೊಂಡಿದ್ದಾರೆ. ತಪ್ಪಿತಸ್ಥ ಪೊಲೀಸರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಒಂದು ವಾರದ ಹಿಂದೆ ಆರೋಪಿಯನ್ನು ಬಂಧಿಸಲಾಗಿದ್ದು, ತನಿಖೆಯ ಭಾಗವಾಗಿ ಪೊಲೀಸ್ ಠಾಣೆಯ ಲಾಕ್-ಅಪ್‌ನಲ್ಲಿ ಇರಿಸಲಾಗಿತ್ತು. ಪೊಲೀಸ್ ಸಿಬ್ಬಂದಿ ನಿದ್ರಿಸುತ್ತಿರುವ ವೇಳೆ ಆರೋಪಿ ಠಾಣೆಯಿಂದ ಪರಾರಿಯಾಗಿದ್ದಾನೆ.

*********

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಭಾರೀ ಮಳೆಯ ಹಿನ್ನಲೆಯಲ್ಲಿ ಇಂದು ಕೂಡ ಪ್ರಾಥಮಿಕ ಶಾಲೆ, ಪದವಿಪೂರ್ವ ಕಾಲೇಜುವರೆಗೆ ರಜೆ ಘೋಷಿಸಲಾಗಿದೆ. ಮಳೆಯ ಸಂದರ್ಭದಲ್ಲಿ ನಾಗರಿಕರು ಸಮುದ್ರ ತೀರ ಮತ್ತು ತಗ್ಗು ಪ್ರದೇಶಗಳತ್ತ ತೆರಳದೆ ಮುನ್ನೆಚ್ಚರಿಕೆ ವಹಿಸುವಂತೆ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ. ಸೂಚನೆ ನೀಡಿದ್ದಾರೆ. ಕಳೆದ ಕೆಲವು ದಿನಗಳಿಂದ ಜಿಲ್ಲೆಯಲ್ಲಿ ಎಡೆಬಿಡದೆ ಮಳೆಸುರಿಯುತ್ತಿದ್ದು ಅಲ್ಲಲ್ಲಿ ಪ್ರಾಕೃತಿಕ ವಿಕೋಪಗಳು ಸಂಭವಿಸುತ್ತಿದೆ. ಜಿಲ್ಲೆಯಲ್ಲಿ ಎಪ್ರಿಲ್ ೧ ರಿಂದ ನಿನ್ನೆಯವರೆಗೆ ಒಟ್ಟು ೪೦೭ ಮನೆಗಳಿಗೆ ಹಾನಿಯಾಗಿದೆ. ಈ ಪೈಕಿ ೬ ಮನೆಗಳು ಸಂಪೂರ್ಣ ಕುಸಿದಿವೆ. ಭಾರೀ ಗಾಳಿ ಮಳೆಯಿಂದಾಗಿ ೬ ಸಾವಿರದ ೬೨೦ ಹೆಕ್ಟೇರ್ ಪ್ರದೇಶದಲ್ಲಿನ ತೋಟಗಾರಿಕಾ ಬೆಳೆಗಳಿಗೆ ಹಾನಿಯಾಗಿದೆ. ೩ ಸಾವಿರದ ೨೧೦ ವಿದ್ಯುತ್ ಕಂಬಗಳು

ಧರೆಗುರುಳಿವೆ. ೧೫ ವಿದ್ಯುತ್ ಪರಿವರ್ತಕಗಳು ಹಾನಿಗೊಂಡಿದ್ದು, ೧೮೪ ಕಿಲೋಮೀಟರ್ ಉದ್ದದ ರಸ್ತೆಗಳು ಹದಗೆಟ್ಟಿವೆ ಎಂದು ಜಿಲ್ಲಾಡಳಿತ ಮಾಹಿತಿ ನೀಡಿದೆ.

*****END****